ಡಿಸೆಂಬರ್-2021

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

## "ODF+ Film Competition"




**"ಸ್ವಚ್ಛತಾ ಫಿಲ್ಮೋಂ ಕಾ ಅಮೃತ್ ಮಹೋತ್ಸವ್"** ಸ್ಪರ್ಧೆಗೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ದೊರೆತ ಹಿನ್ನೆಲೆಯಲ್ಲಿ ಇದೀಗ ಕೇಂದ್ರ ಕುಡಿಯುವ ನೀರು ಮತ್ತು ಜಲಶಕ್ತಿ ಮಂತ್ರಾಲಯ ಭಾರತ ಸರ್ಕಾರವು ಗ್ರಾಮ ಪಂಚಾಯಿತಿಗಳಿಗೆ **ODF+** ಕಿರುಚಿತ್ರ ಸ್ಪರ್ಧೆಯನ್ನು ಆಯೋಜಿಸಿದೆ. ಈ ಕಿರುಚಿತ್ರ ಸ್ಪರ್ಧೆಯಲ್ಲಿ ಪಂಚಾಯಿತಿಗಳು ಮಾತ್ರ ಪಾಲ್ಗೊಳ್ಳಬಹುದಾಗಿದ್ದು, ತಮ್ಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಗ್ರಾಮವೊಂದನ್ನು **ODF** ನಿಂದ **ODF+** ಕಡೆಗೆ ಕೊಂಡೊಯ್ಯಲು ಪಂಚಾಯತಿಯು ತೆಗೆದುಕೊಂಡ ಕ್ರಮಗಳ ಬಗ್ಗೆ ಸಂಕ್ಷಿಪ್ತವಾಗಿ ಕಿರುಚಿತ್ರವನ್ನು ಸೃಜಿಸಬಹುದಾಗಿರುತ್ತದೆ. ಈ ಕಿರುಚಿತ್ರ ಸ್ಪರ್ಧೆಯು ತಮ್ಮ ಗ್ರಾಮದಲ್ಲಾಗಿರುವ ಉತ್ತಮ ಕೆಲಸವನ್ನು **Showcase** ಮಾಡಲು ಮತ್ತು ಉತ್ತಮ ಕೆಲಸ ಮಾಡಿರುವ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳನ್ನು ಗುರುತಿಸಿ, ಗೌರವಿಸಲು ಉತ್ತಮ ವೇದಿಕೆಯಾಗಿದೆ. ಇದಿಷ್ಟೇ ಅಲ್ಲದೆ ತಮ್ಮ ಗ್ರಾಮದಲ್ಲಾಗಿರುವ ಉತ್ತಮ ಕೆಲಸವನ್ನು ದಾಖಲೀಕರಿಸಲು ಸಹಕಾರಿಯಾಗಿದ್ದು, ಗ್ರಾಮದಲ್ಲಿನ ಒಳ್ಳೆಯ ಅಭ್ಯಾಸಗಳು, **ODF** ಸುಸ್ಥಿರತೆ, ಜೈವಿಕ ವಿಘಟನೀಯ ತ್ಯಾಜ್ಯ ನಿರ್ವಹಣೆ, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ, ಮಲ ತ್ಯಾಜ್ಯ ನಿರ್ವಹಣೆ ಹಾಗೂ ಸಮರ್ಪಕ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ಕಿರುಚಿತ್ರಗಳನ್ನು ಸೃಜಿಸಬಹುದಾಗಿರುತ್ತದೆ. 15ನೇ ಡಿಸೆಂಬರ್ 2021ರಿಂದ 15ನೇ ಏಪ್ರಿಲ್ 2022ರ ವರೆಗೆ ಈ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿದ್ದು ಹೆಚ್ಚಿನ ಮಾಹಿತಿಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವೆಬ್ ಪೇಜ್ **https://swachhamevajayate.org/** ಗೆ ಭೇಟಿ ನೀಡಲು ಕೋರಿದೆ.

## "Swachh Iconic Places (SIP)"



ಸಮಗ್ರ **ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ** ಮೂಲಕ ಗ್ರಾಮಗಳಲ್ಲಿ ಶೌಚಾಲಯ ಬಳಕೆಯ ಸುಸ್ಥಿರತೆಯನ್ನು ಕಾಯ್ದುಕೊಂಡು **ODF+** ಹಾದಿಯಲ್ಲಿ ಸಾಗುವ ಮೂಲಕ **ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯ 1ನೇ ಹಂತದಲ್ಲಿ ಸಾಧಿಸಿದ ಅಸಾಮಾನ್ಯ ಮೈಲಿಗಲ್ಲನ್ನು ಮುಂದೆ ಸಾಗಿಸಲು ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ ಉದ್ದೇಶಿಸಿದ್ದು ಈ ನಿಟ್ಟಿನಲ್ಲಿ ಹಲವು ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳುತ್ತಿದೆ. ಎಲ್ಲಾ ರಾಜ್ಯಗಳಿಂದಲೂ ಆಯ್ದ ಪ್ರವಾಸಿ ತಾಣಗಳನ್ನು ಸ್ವಚ್ಛ ಐಕಾನಿಕ್ ಸ್ಥಳಗಳು ಎಂದು ಮಾಡುವ ನಿಟ್ಟಿನಲ್ಲಿ ಕೆಲ ಪ್ರವಾಸಿ ತಾಣಗಳನ್ನು ಆಯ್ಕೆ ಮಾಡಿಕೊಂಡು **Line Department** ಗಳ ಸಹಯೋಗದೊಂದಿಗೆ ಆಯ್ದ ಪ್ರದೇಶದ ಸಮಗ್ರ ಅಭಿವೃದ್ಧಿಗೆ ಇಲಾಖೆ ಮುಂದಾಗಿದೆ. ಈ ನಿಟ್ಟಿನಲ್ಲಿ ರಾಜ್ಯದಿಂದ ಹಾಸನ ಜಿಲ್ಲೆಯ ಚನ್ನರಾಯ ಪಟ್ಟಣ ತಾಲ್ಲೂಕಿನ ಶ್ರವಣಬೆಳಗೊಳ ಗ್ರಾಮ ಪಂಚಾಯಿತಿಯಲ್ಲಿರುವ ಗೊಮ್ಮಟೇಶ್ವರ ಸ್ವಾಮಿ ವಿಗ್ರಹವಿರುವ ಪ್ರದೇಶವನ್ನು ಆಯ್ಕೆ ಮಾಡಿಕೊಳ್ಳಲಾಗಿದೆ.

## ತರಬೇತಿ ಕಾರ್ಯಕ್ರಮಗಳು

### "ರಾಷ್ಟ್ರಮಟ್ಟದ ತರಬೇತಿ ಕಾರ್ಯಾಗಾರ"




ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ **ಜಲ ಜೀವನ್ ಮಿಷನ್** ಯೋಜನೆಯ ಅನುಷ್ಠಾನ ಮಾಡುವಲ್ಲಿ ಐ.ಇ.ಸಿ ಚಟುವಟಿಕೆಗಳ ಪಾತ್ರ ಮಹತ್ವದ್ದಾಗಿದ್ದು, ದಿನಾಂಕ: 09-12-2021 ರಂದು ರಾಷ್ಟ್ರಮಟ್ಟದಲ್ಲಿ **Video Conference** ಮೂಲಕ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು. ಕಾರ್ಯಾಗಾರದಲ್ಲಿ **IEC/BCC approaches and activities, Reaching out to public through Social Media, Use of various media for WASH campaign** ಇತ್ಯಾದಿ ವಿಷಯಗಳ ಬಗ್ಗೆ ದೇಶಾದ್ಯಂತ **Video Conference** ಮೂಲಕ ತರಬೇತಿ ಕಾರ್ಯಾಗಾರದಲ್ಲಿ ಭಾಗಿಯಾಗಿದ್ದ ಎಲ್ಲಾ ರಾಜ್ಯಗಳ ಅಧಿಕಾರಿಗಳಿಗೆ ಐ.ಇ.ಸಿ ಚಟುವಟಿಕೆಗಳ ಕುರಿತು ಮಾಹಿತಿ ನೀಡಲಾಯಿತು





### "ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ"

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಮೈಸೂರು, ಹಾಗೂ ಜಿಲ್ಲಾ ಪಂಚಾಯಿತಿ ಗದಗ ಇವರ ಸಂಯುಕ್ತಾಶ್ರಯದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ 28ನೇ ಡಿಸೆಂಬರ್ ರಂದು ತರಬೇತಿ ಕಾರ್ಯಾಗಾರವನ್ನು ವಿಶ್ವವಿದ್ಯಾಲಯ ಗದಗ್‌ನಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಾಗಾರದಲ್ಲಿ ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ಸೇರಿದಂತೆ ಅಬ್ದುಲ್ ನಜೀರ್ ಸಾಬ್ ಸಂಸ್ಥೆಯ ವಿಷಯ ತಜ್ಞರು ಶಿಬಿರಾರ್ಥಿಗಳಿಗೆ ತರಬೇತಿ ನೀಡಿದರು.





### "ISA ತಂಡಗಳ ಸಿಬ್ಬಂದಿಗೆ ತರಬೇತಿ"



**ಜಲ ಜೀವನ್ ಮಿಷನ್** ಯೋಜನೆಯ ಅನುಷ್ಠಾನ ಸಂಬಂಧ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 'ISA ತಂಡಗಳ ಮೊದಲನೇ ಬ್ಯಾಚ್ ಸಿಬ್ಬಂದಿಗೆ ಗದಗ ಜಿಲ್ಲಾ ಕೇಂದ್ರದಲ್ಲಿ 3 ದಿನಗಳ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಸಮುದಾಯ ಸಜ್ಜುಗೊಳಿಸುವಿಕೆ ವಿಷಯವನ್ನು ಪ್ರಧಾನವಾಗಿಟ್ಟುಕೊಂಡು 28-12-2021 ರಿಂದ 30-12-2021 ರವರೆಗೆ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರದಲ್ಲಿ 50ಕ್ಕೂ ಹೆಚ್ಚು ಮಂದಿ ತರಬೇತಿ ಪಡೆದುಕೊಂಡರು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ರಾಜ್ಯ ಕಚೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿಷಯ ತಜ್ಞರುಗಳು ಶಿಬಿರಾರ್ಥಿಗಳಿಗೆ ತರಬೇತಿ ನೀಡಿದರು.

